## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018–19ನೇ ಸಾಲಿನಿಂದ ನಮ್ಮ ಗ್ರಾಮ ನಮ್ಮ ಯೋಜನೆಯನ್ನು ತಯಾರಿಸಲು ಪ್ಲಾನ್‌ಪ್ಲಸ್ ತಂತ್ರಾಂಶವನ್ನು ಬಳಸುವ ಬಗ್ಗೆ.

ಓದಲಾಗಿದೆ, ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:20–11–2018 ರಂದು ನಡೆದ ಸಭೆಯ ನಡವಳಿ.

*****

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ:20–11–2018 ರಂದು ನಡೆದ ಸಭೆಯ ನಡವಳಿಯ ಅನ್ವಯ 2015–16, 2016–17 ಮತ್ತು 2017–18ನೇ ಸಾಲುಗಳಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ"(ಜಿ.ಪಿ.ಡಿ.ಪಿ) ಕ್ರಿಯಾ ಯೋಜನೆಯ ತಯಾರಿಕೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗಾಂಧಿ ಸಾಕ್ಷಿ ಕಾಯಕ ಮತ್ತು ಪಂಚತಂತ್ರ ತಂತ್ರಾಂಶವನ್ನು ಬಳಸಲಾಗುತ್ತಿತ್ತು.

ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ 14ನೇ ಹಣಕಾಸು ಆಯೋಗ ಅನುದಾನ ಸೇರಿದಂತೆ ಎಲ್ಲಾ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳಿಗೆ ಕಡ್ಡಾಯವಾಗಿ ಒಂದೇ ಸಮಗ್ರ ನಮ್ಮ ಗ್ರಾಮ ನಮ್ಮ ಯೋಜನೆ(GPDP) ಕ್ರಿಯಾ ಯೋಜನೆ ತಯಾರಿಸಿ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ ಅಳವಡಿಸಲು ಹಾಗೂ ಹೆಚ್ಚುವರಿ ಅನುದಾನ ಬಿಡುಗಡೆಯಾದಲ್ಲಿ ಪೂರಕ (Supplementary) ಕ್ರಿಯಾ ಯೋಜನೆ ತಯಾರಿಸಿ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ ಅಳವಡಿಸಲು ನಿರ್ಣಯ ಕೈಗೊಳ್ಳಲಾಗಿದೆ.

2018–19ನೇ ಸಾಲಿನಿಂದ ನಮ್ಮ ಗ್ರಾಮ ನಮ್ಮ ಯೋಜನೆ(GPDP) ಕ್ರಿಯಾ ಯೋಜನೆ ತಯಾರಿಕೆಗೆ ಪ್ಲಾನ್‌ಪ್ಲಸ್ ತಂತ್ರಾಂಶವನ್ನು ಬಳಕೆ ಮಾಡಲು ತೀರ್ಮಾನಿಸಿರುವುದರಿಂದ ಪ್ರಸ್ತುತ ಬಳಸುತ್ತಿರುವ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ GPDP Module ಕೈಬಿಡಲು ತೀರ್ಮಾನಿಸಲಾಗಿದೆ ಹಾಗೂ ಭಾರತ ಸರ್ಕಾರದ ActionSoft ತಂತ್ರಾಂಶದಲ್ಲಿ ಗಾಂಧಿ ಸಾಕ್ಷಿ ಕಾಯಕದಲ್ಲಿ ಇರುವ ಎಲ್ಲಾ ಸೌಲಭ್ಯಗಳು ಇರುವುದರಿಂದ ActionSoft ತಂತ್ರಾಂಶದಲ್ಲಿ 14ನೇ ಹಣಕಾಸು ಆಯೋಗದ ಅನುದಾನದ ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಅಳವಡಿಸಲು ತೀರ್ಮಾನಿಸಲಾಗಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 440 ಜಿಪಸ 2018, ಬೆಂಗಳೂರು, ದಿನಾಂಕ:17–12–2018.**

ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, 2018–19ನೇ ಸಾಲಿನಿಂದ ಎಲ್ಲಾ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳಿಗೆ ಒಂದೇ ಸಮಗ್ರ ನಮ್ಮ ಗ್ರಾಮ ನಮ್ಮ ಯೋಜನೆ(GPDP) ಕ್ರಿಯಾ ಯೋಜನೆ ತಯಾರಿಕೆಗೆ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ ಬಳಕೆ ಮಾಡುವಂತೆಯೂ ಹಾಗೂ ಪ್ರಸ್ತುತ ಬಳಸುತ್ತಿರುವ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ GPDP Module ಕೈಬಿಡುವಂತೆಯೂ ಮತ್ತು 14ನೇ ಹಣಕಾಸು ಆಯೋಗ ಅನುದಾನದ ಬಿಡುಗಡೆಗೆ ಸಂಬಧಿಸಿದಂತೆ 2018–19ನೇ ಸಾಲಿನಿಂದ ಅನುದಾನದ ಮೇಲ್ವಿಚಾರಣೆಗೆ PRIASoft ತಂತ್ರಾಂಶವನ್ನು ಬಳಸಲು ಹಾಗೂ ಅನುದಾನದ ವೆಚ್ಚ ಮತ್ತು ಪಾವತಿಗಳನ್ನು PFMS ತಂತ್ರಾಂಶದ ಮೂಲಕವೇ ಕಡ್ಡಾಯವಾಗಿ ಎಲ್ಲಾ ಗ್ರಾಮ ಪಂಚಾಯಿತಿಗಳು ಅನುಸರಿಸಿ ಅನುದಾನ ಪಾವತಿಸುವಂತೆ ಹಾಗೂ 14ನೇ ಹಣಕಾಸು

ಆಯೋಗದ ಕಾಮಗಾರಿಗಳ ಭೌತಿಕ ಪ್ರಗತಿಯನ್ನು ActionSoft ತಂತ್ರಾಂಶದಲ್ಲಿ ಅಳವಡಿಸುವಂತೆ ಹಾಗೂ ಸದರಿ ಕಾಮಗಾರಿಗಳನ್ನು mActionSoft ಮೊಬೈಲ್ ಆ್ಯಪ್‌ನಲ್ಲಿ Geotag ಮಾಡಲು ಆದೇಶಿಸಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿ ಅನುದಾನ ಬಿಡುಗಡೆಯಾದ್ದಲ್ಲಿ ಪೂರಕ (Supplementary) ಕ್ರಿಯಾ ಯೋಜನೆ ತಯಾರಿಸಿ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ ಅಳವಡಿಸುವುದು ಹಾಗೂ ಪ್ಲಾನ್‌ಪ್ಲಸ್ ತಂತ್ರಾಂಶದಲ್ಲಿ 4 ಪೂರಕ ಕ್ರಿಯಾ ಯೋಜನೆಯನ್ನು ತಯಾರಿಸಿ ಅಳವಡಿಸಲು ಮಾತ್ರ ಅವಕಾಶ ನೀಡಲಾಗಿದೆ.

ನಮ್ಮ ಗ್ರಾಮ ನಮ್ಮ ಯೋಜನೆ ಕ್ರಿಯಾ ಯೋಜನೆಯನ್ನು ಕಡ್ಡಾಯವಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಂದ ಅನುಮೋದನೆ ಪಡೆದ ನಂತರವೇ PlanPlus ತಂತ್ರಾಂಶದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅನುಮೋದನೆ ನೀಡಲು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
17.12.18

**ಇವರಿಗೆ:**

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ನಿರ್ದೇಶಕರು(ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ, ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
6. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
7. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯ ಮುಖಾಂತರ).
8. ಕರ್ನಾಟಕ ವಿಕಾಸ ಮಾಸಪತ್ರಿಕೆಯಲ್ಲಿ ಪ್ರಕಟಿಸಲು.
9. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
10. ಶಾಖಾ ರಕ್ಷಾಕಡತಕ್ಕೆ / ಹೆಚ್ಚುವರಿ ಪ್ರತಿ

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು(ಪಂ.ರಾಜ್-1 & 2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.